# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 536
2. ಸದಸ್ಯರ ಹೆಸರು : ಶ್ರೀ ರಾಜೇಂದ್ರ ರಾಜಣ್ಣ
3. ಉತ್ತರಿಸುವ ದಿನಾಂಕ : 11.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕೊಬ್ಬರಿ ಧಾರಣೆಯ ಬೆಲೆಯು ದಿನದಿಂದ ದಿನಕ್ಕೆ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |
| (ಆ) | ಬಂದಿದ್ದಲ್ಲಿ, ಕೊಬ್ಬರಿಗೆ ಬೆಂಬಲ ಬೆಲೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? | 2023-24ನೇ ಸಾಲಿಗೆ ಕೇಂದ್ರ ಸರ್ಕಾರವು ಎಫ್.ಎ.ಕ್ಯೂ ಗುಣಮಟ್ಟದ ಉಂಡೆ ಕೊಬ್ಬರಿ ಪ್ರತಿ ಕ್ವಿಂಟಾಲ್‌ಗೆ ರೂ.11,750/- ಗಳನ್ನು ಘೋಷಿಸಲಾಗಿದ್ದು, ರಾಜ್ಯದ ಪ್ರಮುಖ ಮಾರುಕಟ್ಟೆಗಳಲ್ಲಿ ಕೊಬ್ಬರಿ ಧಾರಣೆಯು ಬೆಂಬಲ ಬೆಲೆಗಿಂತ ಕಡಿಮೆ ಧಾರಣೆಯಲ್ಲಿ ಮಾರಾಟವಾದ ಹಿನ್ನಲೆಯಲ್ಲಿ, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಶಿಫಾರಸ್ಸಿನ ಮೇಲೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು.<br><br>ರಾಜ್ಯ ಸರ್ಕಾರದ ಕೋರಿಕೆಯ ಮೇರೆಗೆ, ಕೇಂದ್ರ ಸರ್ಕಾರವು ಗರಿಷ್ಠ 5,47,500 ಕ್ವಿಂಟಾಲ್‌ನಷ್ಟು ಖರೀದಿ ಪ್ರಮಾಣ ನಿಗದಿಪಡಿಸಿ, 06 ತಿಂಗಳ ಖರೀದಿ ಕಾಲಾವಕಾಶ ನೀಡಿ ಅನುಮೋದನೆ ನೀಡಲಾಗಿರುತ್ತದೆ. ಇದಕ್ಕನುಗುಣವಾಗಿ ಕೃಷಿ ಮತ್ತು ತೋಟಗಾರಿಕಾ ಉತ್ಪನ್ನಗಳ ಬೆಲೆ ಸ್ಥಿರೀಕರಣ ಸಚಿವ ಸಂಪುಟ ಉಪ ಸಮಿತಿ ಸಭೆಯ ತೀರ್ಮಾನದಂತೆ ಕೊಬ್ಬರಿ ಬೆಳೆಯು ಜಿಲ್ಲೆಗಳಾದ ತುಮಕೂರು, ಹಾಸನ, ಚಿಕ್ಕಮಗಳೂರು, ಚಿತ್ರದುರ್ಗ, ಮಂಡ್ಯ, ಮೈಸೂರು ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ರೈತರಿಂದ ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಯಾದ ನ್ಯಾಫೆಡ್ ಹಾಗೂ ರಾಜ್ಯ ಸರ್ಕಾರದ ಖರೀದಿ ಸಂಸ್ಥೆಯಾದ ಮಾರ್ಕ್‌ಫೆಡ್ ಸಂಸ್ಥೆ ಮೂಲಕ ದಿನಾಂಕ:27.01.2023ರ ಸರ್ಕಾರದ ಆದೇಶದನ್ವಯ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿರುತ್ತದೆ<br><br>1. ನೋಂದಣಿ ಮಾಡಿದ ರೈತರ ಸಂಖ್ಯೆ: 37,627<br>2. ಪ್ರಯೋಜನ ಪಡೆದುಕೊಂಡ ರೈತರ ಸಂಖ್ಯೆ: 29,922<br>3. ಪ್ರಯೋಜನ ಪಡೆಯಬೇಕಾದ ರೈತರ ಸಂಖ್ಯೆ: 7,705<br>4. ದಿನಾಂಕ: 03.07.2023ರ ಅಂತ್ಯಕ್ಕೆ ಖರೀದಿಸಲಾಗಿರುವ ಪ್ರಮಾಣ 4,29,999 ಕ್ವಿಂಟಾಲ್<br>5. ದಿನಾಂಕ: 26.07.2023ರವರೆಗೆ ಖರೀದಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |

ಸಂಖ್ಯೆ: ಸಿಒ 127 ಎಂಆರ್‌ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು